612

ಶ್ರೀ ಪಿ. ಸಿ. ಸಿದ್ದನಗೌಡರು (ಕಲಘಟಗಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಬ್-ರಿಜಿಸ್ಟ್ರಾರ್ ಕಛೇರಿಯಲ್ಲಿ ನೋಂದಣಿ ಮಾಡುವಾಗ ಸಂಬಂಧಪಟ್ಟ ಅಧಿಕಾರಿಗಳು ಸರ್ಕಾರದ ನಿಯಮಗಳನ್ನು ಪಾಲಿಸದೇ ನೋಂದಣಿಯನ್ನು ಮಾಡಿ ಅನೇಕ ಪ್ರಕರಣಗಳಲ್ಲಿ ವ್ಯಾಜ್ಯ ಉಂಟುಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಇ) ನೋಂದಣಿ ಮಾಡಿಸುವಾಗ ಭ್ರಷ್ಟಾಚಾರ ನಡೆಯದಂತಾಗುವ ದೃಷ್ಟಿಯಿಂದ ಸರ್ಕಾರಕ್ಕೆ ಬರುವ ಸ್ಟ್ಯಾಂಪ್ ಡ್ಯೂಟಿಯ ಫೀಜನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಚಲನ್ ರೂಪದಲ್ಲಿ ತುಂಬುವ ವ್ಯವಸ್ಥೆ ಮಾಡಿದರೆ ಭ್ರಷ್ಟಾಚಾರ ತಡೆಯ ಬಹುದಲ್ಲವೇ?

ಈ) ಹಾಗಿದ್ದಲ್ಲಿ, ಈ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ರಾಜಶೇಖರಮೂರ್ತಿ(ಕಂದಾಯ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಮುದ್ರಾಂಕ ಶುಲ್ಕವನ್ನು ಚಲನ್ ಮೂಲಕ ಪಾವತಿ ಮಾಡುವ ವ್ಯವಸ್ಥೆಯು ಈಗಾಗಲೇ ರೂಢಿಯಲ್ಲಿದೆ. ಹಣವನ್ನು ಖಜಾನೆಗಾಗಲೀ ಅಥವಾ ಅಧಿಕಾರ ಪಡೆದ ಯಾವುದೇ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಶಾಖೆಗೆ ಸಂದಾಯ ಮಾಡಬಹುದು.

ಈ) ಉದ್ಭವಿಸುವುದಿಲ್ಲ.

ವಿಷಯ : ವೀರಾಜಪೇಟೆ ತಾಲ್ಲೂಕು ಬೆಟೋಳಿ ಗಾಮದಲ್ಲಿ ಸಾರ್ವಜನಿಕ ಸ್ಮಶಾನಕ್ಕಾಗಿ ಜಮೀನು ಮಂಜೂರಾತಿ.

694

ಶ್ರೀಮತಿ ಸುಮಾ ವಸಂತ (ವೀರಾಜ ಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೀರಾಜಪೇಟೆ ತಾಲ್ಲೂಕು ಬೆಟೋಳಿ ಗ್ರಾಮದಲ್ಲಿ ಸಾರ್ವಜನಿಕರಿಗೆ ಸ್ಮಶಾನಕ್ಕೆ ಜಾಗವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಆ ಬಗ್ಗೆ ಏನು ಕ್ರಮ ತೆಗೆದುಕೊಳ್ಳಲಾಗಿದೆ?

ಇ) ಎಷ್ಟು ಸಮಯದಲ್ಲಿ ಜಾಗ ಮಂಜೂರು ಮಾಡುವುದರ ಬಗ್ಗೆ ಕ್ರಮ ತೆಗೆದು ಕೊಳ್ಳಲಾಗುವುದು?

ಶ್ರೀ ಎಂ. ರಾಜಶೇಖರಮೂರ್ತಿ(ಕಂದಾಯ ಸಚಿವರು) :

ಅ) ಹೌದು.

ಆ) ಮಂಜೂರಾತಿಗೆ ಸರ್ಕಾರಿ ಭೂಮಿ ಲಭ್ಯವಿಲ್ಲದ ಕಾರಣ ಶ್ರೀಮತಿ ಅಪ್ಪಾರಂಡ

ದೇವಯ್ಯ ಇವರು ಸ.ನಂ. 53:1ರಲ್ಲಿರುವ 80 ಸೆಂಟ್ಸ್ ಜಮೀನನ್ನು ಸ್ಮಶಾನಕ್ಕಾಗಿ ಕಾಯ್ದಿರಿಸಲು ವೀರಾಜಪೇಟೆ ಮಂಡಲ ಪಂಚಾಯತಿಗೆ ದಾನವಾಗಿ ಕೊಟ್ಟಿರುತ್ತಾರೆ.

ಇ) ಭೂ ಮಾಲೀಕರಿಂದ ದಾನ ಪತ್ರ ಪಡೆದ ನಂತರ ಕ್ರಮ ಕೈಗೊಳ್ಳುವಂತೆ ಮಂಡಲ ಪಂಚಾಯ್ತಿಗೆ ನಿರ್ದೇಶನ ನೀಡಲಾಗಿದೆ.

ವಿಷಯ: ಕೊಡಗು ಜಿಲ್ಲೆಯಲ್ಲಿ ಮಳೆಯಿಂದ ಹಾನಿಗೀಡಾದ ಮನೆಗಳು.

803

ಶ್ರೀಮತಿ ಸುಮಾ ವಸಂತ (ವೀರಾಜಪೇಟೆ): ಮಾನ್ಯ ಕಂದಾಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1991-92ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆಯಿಂದ ಹಾನಿಗೊಳಗಾದ ಮನೆಗಳೆಷ್ಟು ?(ತಾಲ್ಲೂಕುವಾರು ವಿವರ ನೀಡುವುದು)

ಆ) ಈ ರೀತಿ ಮನೆ ಕಳೆದುಕೊಂಡವರಿಗೆ ಪರಿಹಾರ ನೀಡಲಾಗಿದೆಯೇ?

ಇ) ಹಾಗಿದ್ದಲ್ಲಿ ಪರಿಹಾರದ ಮೊತ್ತವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

ಶ್ರೀ ಎಂ. ರಾಜಶೇಖರಮೂರ್ತಿ(ಕಂದಾಯ ಸಚಿವರು) :

ಅ) ಕೊಡಗು ಜಿಲ್ಲೆಯಲ್ಲಿ 1991-92ರ ಮಳೆಯಿಂದಾಗಿ ಹಾನಿಗೊಳಗಾದ ಮನೆಗಳ ಸಂಖ್ಯೆ: 855.
ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

ಮಡಿಕೇರಿ	:	153
ವೀರಾಜಪೇಟೆ	:	321
ಸೋಮವಾರಪೇಟೆ	:	381
ಒಟ್ಟು	:	855

ಆ) ಹೌದು.

ಇ) ನೀಡಲಾದ ಒಟ್ಟು ಪರಿಹಾರ ರೂ.5,90,212.00
ತಾಲ್ಲೂಕುವಾರು ವಿವರ ಈ ಕೆಳಕಂಡಂತಿವೆ:

ತಾಲ್ಲೂಕಿನ ಹೆಸರು	ಹಾನಿಯಾದ ಮನೆಗಳ ಸಂಖ್ಯೆ	ನೀಡಿರುವ ಪರಿಹಾರದ ಮೊತ್ತ
		(ರೂ.ಗಳಲ್ಲಿ)
1. ಮಡಿಕೇರಿ	153	1,19,673.00
2. ವೀರಾಜಪೇಟೆ	321	2,11,079.00
3. ಸೋಮವಾರಪೇಟೆ	381	2,59,460.00
ಒಟ್ಟು	855	5,90,212.00